ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಸಕಾಲ ವ್ಯವಸ್ಥೆಯಲ್ಲಿ ಅರ್ಜಿಗಳ ವಿಲೇವಾರಿ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು) –

59 (51) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಿಂದ ಬಿ. ಬಿ. ಎಂ. ಪಿ ಹಾಗೂ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯ ಕಂದಾಯ ಮತ್ತು ಸರ್ವೆ ಇಲಾಖೆಗಳಿಗೆ ಸಕಾಲ ವ್ಯವಸ್ಥೆಯಡಿ ದಾಖಲಾದ ಅರ್ಜಿಗಳ ಸಂಖ್ಯೆ ಎಷ್ಟು; (ಇಲಾಖೆವಾರು ವಿವರ ನೀಡುವುದು)

(ಆ) ದಾಖಲಿಸಲ್ಪಟ್ಟ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳು ವಿಲೇಯಾಗಿವೆ; ವಿಲೇಗಾಗಿ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ನಿಯಮಿತ ಅವಧಿಯೊಳಗೆ ವಿಲೇ ಮಾಡದೆ ಬಾಕಿ ಇರುವ ಅರ್ಜಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)